# ಐಪಿಎಲ್ ಹಬ್ಬಕ್ಕೆ ಮಹೂರ್ತ ಫಿಕ್ಸ್ : ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಾ ಉದ್ಘಾಟನಾ ಪಂದ್ಯ..?

**ಮುಂಬೈ, ಡಿ. 16–** ಮುಂಬರುವ ಇಂಡಿಯನ್ ಪ್ರೀಮಿಯರ್ ಲೀಗ್ ಆವೃತ್ತಿಗೆ ದಿನಾಂಕ ನಿಗದಿಯಾಗಿದೆ.ಇದೇ ಮಾರ್ಚ್ 26 ರಿಂದ ಮೇ 31 ರವರೆಗೆ ಹೊಡಿ ಬಡಿ ಖ್ಯಾತಿಯ ಟಿ20 ಐಪಿಎಲ್ ಟೂರ್ನಿ ನಡೆಯಲಿದೆ.

ಆದರೆ ಆರ್‌ಸಿಬಿಯ ತವರು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಉದ್ಘಾಟನಾ ಪಂದ್ಯವನ್ನು ನಡೆಸುತ್ತದೆಯೇ ಎಂದು ಕಾದು ನೋಡಬೇಕಾಗಿದೆ.

ನಿಯಮಗಳ ಪ್ರಕಾರ, ಎಂ. ಚಿನ್ನಸ್ವಾಮಿ ಕ್ರೀಡಾಂಗಣವು ಟೂರ್ನಮೆಂಟ್‌ನ ಉದ್ಘಾಟನಾ ಪಂದ್ಯವನ್ನು ಆತಿಥ್ಯ ವಹಿಸಬೇಕು ಏಕೆಂದರೆ ತವರು ತಂಡವಾದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಐಪಿಎಲ್ 2025 ಪ್ರಶಸ್ತಿಯನ್ನು ಗೆದ್ದಿದೆ.

ಈ ಸ್ಥಳವು ಕರ್ನಾಟಕ ರಾಜ್ಯ ಸರ್ಕಾರದಿಂದ ಷರತ್ತುಬದ್ಧ ಅನುಮತಿಯನ್ನು ಪಡೆದಿದ್ದರೂ, ಈ ವರ್ಷದ ಜೂನ್‌ನಲ್ಲಿ ಆರ್‌ಸಿಬಿಯ ವಿಜಯೋತ್ಸವದ ಸಂದರ್ಭದಲ್ಲಿ ಕಾಲ್ತುಳಿತದಲ್ಲಿ




11 ಅಭಿಮಾನಿಗಳು ಸಾವನ್ನಪ್ಪಿದ ನಂತರ ಅಗತ್ಯ ಸುರಕ್ಷತೆ ಮತ್ತು ಭದ್ರತಾ ಮಾನದಂಡಗಳನ್ನು ಪೂರೈಸಬೇಕಾಗಿದೆ.

ಐಪಿಎಲ್ 2026 ರ ಮಿನಿ-ಹರಾಜು ಇಂದು ಅಬುಧಾಬಿಯಲ್ಲಿ ನಡೆಯಲಿದ್ದು, ಮೂರು ಬಾರಿ ವಿಜೇತ ಕೋಲ್ಕತ್ತಾ ನೈಟ್ ರೈಡರ್ಸ್ ಅತಿ ದೊಡ್ಡ ಹಣದೊಂದಿಗೆ ಆಗಮಿಸುತ್ತಿದೆ.

# ಹುಟ್ಟುಹಬ್ಬ ಶುಭಾಶಯ ಕೋರಿದ ಪ್ರಧಾನಿ ಮೋದಿ : ಭಾವುಕರಾಗಿ ಧನ್ಯವಾದ ಹೇಳಿದ ಹೆಚ್ಡಿಕೆ

**ಬೆಂಗಳೂರು,ಡಿ.16–** ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಹುಟ್ಟುಹಬ್ಬಕ್ಕೆ ಪ್ರಧಾನಮಂತ್ರಿ ನರೇಂದ್ರಮೋದಿ ಅವರು ಶುಭಾಶಯ ಕೋರಿದ್ದಾರೆ.ನನ್ನ ಹುಟ್ಟು ಹಬ್ಬದ ಸಂದರ್ಬದಲ್ಲಿ ಮೋದಿ ಅವರ ಶುಭಾಶಯ ಹಾಗೂ ಶುಭಾಶೀರ್ವಾದದಿಂದ ನಾನು ಭಾವುಕನಾಗಿದ್ದೇನೆ ಮತ್ತು ವಿನೀತನಾಗಿದ್ದೇನೆ. ಅವರ ಪಿತೃವಾತ್ಸಲ್ಯಕ್ಕೆ ನಾನು ಧನ್ಯನಾಗಿದ್ದೇನೆ ಎಂದು ಕುಮಾರಸ್ವಾಮಿ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಧಾನಿಗಳ ಚಿಂತನಶೀಲ ಮಾರ್ಗದರ್ಶನ, ಪ್ರೋತ್ಸಾಹ ಮತ್ತು ನನ್ನ ಮೇಲಿನ ನಂಬಿಕೆಗೆ ನಾನು ಚಿರಋಣಿ ಆಗಿದ್ದೇನೆ ಎಂದಿದ್ದಾರೆ. ಪ್ರಧಾನಮಂತ್ರಿಗಳ ಶುಭಾಶೀರ್ವಾದ ಮತ್ತು ಸಂದೇಶವು, ಸಾರ್ವಜನಿಕ ಸೇವೆಯು ಕೇವಲ ಒಂದು ಜವಾಬ್ದಾರಿಯಲ್ಲ,



ಬದಲಿಗೆ ರಾಷ್ಟ್ರ, ಸಮಾಜ ಮತ್ತು ಸಾರ್ವಜನಿಕರ ಕಲ್ಯಾಣಕ್ಕಾಗಿ ಜೀವಮಾನದ ಅನನ್ಯ ಸಮರ್ಪಣೆಯಾಗಿದೆ ಎಂಬುದನ್ನು ನೆನಪಿಸುತ್ತದೆ.

# 'ವೋಟ್ ಚೋರಿ' ಕಥೆ ಕಟ್ಟಿದ ಕಾಂಗ್ರೆಸ್ ವಿರುದ್ಧ ರಾಜ್ಯಸಭೆಯಲ್ಲಿ ಗುಡುಗಿದ ಗೌಡರು

**ನವದೆಹಲಿ,ಡಿ.16–** ವೋಟ್ ಚೋರಿ ಹೆಸರಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರ ಹಾಗೂ ಸಾಂವಿಧಾನಿಕ ಸಂಸ್ಥೆಗಳ ವಿರುದ್ಧ ಸುಳ್ಳಿನ ಸಂಕಥನ ಸೃಷ್ಟಿಸುತ್ತಿರುವ ಪ್ರತಿಪಕ್ಷಗಳು ಭವಿಷ್ಯದಲ್ಲಿ ಪರಿಣಾಮ ಅನುಭವಿಸುತ್ತವೆ ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಗಂಭೀರ ಎಚ್ಚರಿಕೆ ನೀಡಿದ್ದಾರೆ. ರಾಜ್ಯಸಭೆಯಲ್ಲಿ ನಿನ್ನೆ ಈ ಕುರಿತ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರತಿಪಕ್ಷಗಳು ನಿರಂತರವಾಗಿ ಸುಳ್ಳಿನ ಕಥೆಗಳನ್ನು ಪ್ರಚಾರ ಮಾಡುತ್ತಾ ಹೋದರೆ, ಮತದಾರರ ಮನಸ್ಸಿನಲ್ಲಿ ಅನುಮಾನಗಳನ್ನು ಹುಟ್ಟು ಹಾಕಿದರೆ ಅದರಿಂದ ಪ್ರತಿಪಕ್ಷಗಳಿಗೆ ಒಳ್ಳೆಯದು ಆಗುವುದಿಲ್ಲ ಎಂದು ಹೇಳಿದ್ದಾರೆ.

ಪ್ರತಿಪಕ್ಷಗಳು ಪ್ರಧಾನಿಯವರ ಬಗ್ಗೆ ಹಾದಿ-ಬೀದಿಗಳಲ್ಲಿ ಮತ್ತು ಸಾರ್ವಜನಿಕ ವೇದಿಕೆಗಳಲ್ಲಿ ಕೆಟ್ಟದ್ದಾಗಿ ಟೀಕೆ ಮಾಡುತ್ತಿರುವ ಬಗ್ಗೆ ಮಾ ಹರಿಹಾಯ್ದಿದ್ದಾರೆ.ನಮ್ಮದು ಬಹಳ ದೊಡ್ಡ ರಾಷ್ಟ್ರ. ಕಾಂಗ್ರೆಸ್ ಪಕ್ಷವು ಮೂರು ರಾಜ್ಯಗಳಲ್ಲಿ ಅಧಿಕಾರದಲ್ಲಿ ಇರಬಹುದು. ನನ್ನ ಪ್ರತಿಪಕ್ಷ ಸ್ನೇಹಿತರೇ ದಯವಿಟ್ಟು ನೆನಪಿಡಿ ವೋಟ್ ಚೋರಿ ಎಂಬ ಪದಗಳನ್ನು ಬಳಸುವುದರಿಂದ ನೀವು ಮುಂಬರುವ ದಿನಗಳಲ್ಲಿ ತೊಂದರೆ ಅನುಭವಿಸುತ್ತಿರಿ. ನೀವು ಯುದ್ಧದಲ್ಲಿ ಗೆಲ್ಲಲು ಸಾಧ್ಯವಿಲ್ಲ ಎಂದು ದೇವೇಗೌಡರು ಕಟುವಾದ ಶಬ್ದಗಳಲ್ಲಿ ತಿಳಿಸಿದ್ದಾರೆ.

ವೋಟ್ ಚೋರಿ ಎಂಬ ಅಪಪ್ರಚಾರದ ಮೂಲಕ ನರೇಂದ್ರ ಮೋದಿ ಅವರ ನಾಯಕತ್ವವನ್ನು ದೂಷಿಸುವ ಮೂಲಕ ಮತ್ತು ಮತದಾರರ ಮನಸ್ಸಿನಲ್ಲಿ ಅನುಮಾನವನ್ನು ಸೃಷ್ಟಿಸುವ ಮೂಲಕ ಪ್ರತಿಪಕ್ಷಗಳು ಏನು ಗಳಿಸಲಿವೆ ಎಂದು ಪ್ರಶ್ನಿಸಿದ ಮಾಜಿ ಪ್ರಧಾನಿಗಳು, ನಿಮ ಮನಸ್ಸಿಗೆ ಏನಾಗಿದೆ? ಏನಾದರೂ ಸಮಸ್ಯೆ ಇದ್ದರೆ ಸರಿಪಡಿಸಿಕೊಳ್ಳಿ ಎಂದು ಪ್ರತಿಪಕ್ಷದವರಿಗೆ ಕಿವಿಮಾತು ಹೇಳಿದ್ದಾರೆ.

ನಾನು ಏಳು ದಶಕಗಳಿಗೂ ಹೆಚ್ಚಿನ ಸಾರ್ವಜನಿಕ ಜೀವನದಲ್ಲಿ ಚುನಾವಣೆಯಲ್ಲಿ ಸೋಲು, ಗೆಲುವನ್ನು ಎದುರಿಸಿದ್ದೇನೆ. ನಾನು ಎಂದಿಗೂ ಮತಗಳ್ಳತನದಂತಹ ವಿಷಯಗಳನ್ನು ಹೇಳಲಿಲ್ಲ ಎಂದು ಅವರು ಒತ್ತಿ ಹೇಳಿದ್ದಾರೆ.ಕೇರಳದಲ್ಲಿ 18,000 ಮತದಾರರ ಸೇರ್ಪಡೆಗೆ ಸಂಬಂಧಿಸಿದಂತೆ ಅಂದಿನ ಪ್ರಧಾನಿ ಜವಾಹರಲಾಲ್ ನೆಹರು ಬರೆದ ಪತ್ರವನ್ನು ಅವರು ಉಲ್ಲೇಖಿಸಿದ್ದಾರೆ.

ನಾನು ಇದನ್ನು ಏಕೆ ಹೇಳುತ್ತಿದ್ದೇನೆಂದರೆ ನೆಹರು ಅವಧಿಯಲ್ಲಿಯೂ ಸಹ ಚುನಾವಣಾ ವ್ಯವಸ್ಥೆಯಲ್ಲಿ ಕೆಲವು ಲೋಪಗಳು ಇದ್ದವು ಎಂಬುದಾಗಿ ಜೂನ್ 1, 1996 ಮತ್ತು ಏಪ್ರಿಲ್ 21, 1997ರ ನಡುವೆ ಪ್ರಧಾನಿಯಾಗಿದ್ದ ದೇವೇಗೌಡರು ತಿಳಿಸಿದ್ದಾರೆ.



# ರಸ್ತೆ, ಚರಂಡಿ ಬೇಡ ಅಂದವರಿಗೆ ತುಮಕೂರಿಗೆ ಮಾತ್ರ ಮೆಟ್ರೊ ಏಕೆ ಬೇಕು..? : ಆರ್.ಅಶೋಕ ಪ್ರಶ್ನೆ

**ಬೆಂಗಳೂರು,ಡಿ.16–** ರಸ್ತೆ, ಚರಂಡಿ ಬೇಡ ಅಂದವರಿಗೆ ತುಮಕೂರಿಗೆ ಮಾತ್ರ ಮೆಟ್ರೊ ಯಾಕೆ ಬೇಕು ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ ಪ್ರಶ್ನೆ ಮಾಡಿದ್ದಾರೆ. ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ರಸ್ತೆ, ಚರಂಡಿ ನಿರ್ಮಾಣದಿಂದ ಜನ ಉದ್ಧಾರ ಆಗ್ತಾರಾ? ಎಂದು ಪರಮೇಶ್ವರ್ ಮಾತಿಗೆ ವಿಪಕ್ಷಗಳು ವಿರೋಧ ವ್ಯಕ್ತಪಡಿಸಿದ್ದು, ಗೃಹ ಸಚಿವರ ಮಾತು ಸರಿಯೇ? ಎಂಬ ಚರ್ಚೆಯನ್ನು ಹುಟ್ಟು ಹಾಕಿದೆ. ಈ ಬಗ್ಗೆ ಆರ್.ಅಶೋಕ ಟ್ವಿಟ್ ಮೂಲಕವೇ ಆಕ್ರೋಶ ಹೊರ ಹಾಕಿದ್ದಾರೆ.

ಸರ್ಕಾರ ನಡೆಸುವುದು, ಅಭಿವೃದ್ಧಿ ಮಾಡುವುದು ಅಂದರೆ 3 ತಿಂಗಳಿಗೋ, 6 ತಿಂಗಳಿಗೋ ಒಮ ಗೃಹಲಕ್ಷ್ಮಿ ಹಣ ಅಕೌಂಟಿಗೆ ಹಾಕೋದು, ಬಾಕಿ ಸಮಯದಲ್ಲಿ ರಾಜಕೀಯ ಮಾಡೋದು, ಕುರ್ಚಿಗಾಗಿ ಕಿತ್ತಾಡೋದು ಅಂದುಕೊಂಡಿದ್ದಾರೆ ಕಾಂಗ್ರೆಸ್? ನಾಯಕರು. ರಸ್ತೆ, ಚರಂಡಿ, ಮೂಲಸೌಕರ್ಯ ನಿರ್ಮಾಣದಿಂದ ಬಡವರು ಉದ್ಧಾರ ಆಗಿಲ್ಲ ಎನ್ನುವ ಮನಸ್ಥಿತಿ ಇರುವ ಕಾಂಗ್ರೆಸ್ ಸರ್ಕಾರದಿಂದ ಕರ್ನಾಟಕದ ಜನತೆ ಇನ್ನೇನು ತಾನೇ ನಿರೀಕ್ಷಿಸಲು ಸಾಧ್ಯ? ಎಂದು ವಾಗ್ದಾಳಿ ನಡೆಸಿದ್ದಾರೆ.

ರಸ್ತೆ, ಚರಂಡಿ ಬೇಡ ಎಂದ ಮೇಲೆ, ತುಮಕೂರಿನವರೆಗೂ ಮೆಟ್ರೊ ಏಕೆ ಬೇಕು ಪರಮೇಶ್ವರ್ ಅವರೇ ಎಸ್ ಸಿ, ಎಸ್ ಪಿ/ ಟಿಎಸ್ ಪಿ ಹಣ ದುರ್ಬಳಕೆ ಮಾಡಿಕೊಳ್ಳುತ್ತಿರುವಂತೆ, ಮೆಟ್ರೊ? ಕಾಮಗಾರಿಯ ಹಣವನ್ನೂ ಗ್ಯಾರೆಂಟಿ ಯೋಜನೆಗಳಿಗೆ ಬಳಸಿಕೊಂಡು ಬಿಡಿ ಎಂದು ಅವರು ಸರ್ಕಾರದ ವಿರುದ್ಧ ಆಕ್ರೊ?ಶ ಹೊರಹಾಕಿದ್ದಾರೆ.

ನಾಲಾಯಕ್ ಕಾಂಗ್ರೆಸ್ ಸರ್ಕಾರ ತೊಲಗುವವರೆಗೂ ರಾಜ್ಯದಲ್ಲಿ ಅಭಿವೃದ್ಧಿ ಅಸಾಧ್ಯ. ಇದಂತೂ ಗ್ಯಾರೆಂಟಿ. ರಸ್ತೆ, ಚರಂಡಿ ನಿರ್ಮಾಣದಿಂದ ಜನ ಉದ್ಧಾರ ಆಗ್ತಾರಾ? ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಕೇಳುತ್ತಾರೆ. ಅಲ್ಲಿಗೆ ಉದಯವಾಯಿತು ನಮ ಚೆಲುವ ಕನ್ನಡ ನಾಡು! ಎಂದು



ವ್ಯಂಗ್ಯವಾಡಿದ್ದಾರೆ.

ಗೃಹ ಸಚಿವ ಪರಮೇಶ್ವರ್ ಹೇಳಿದ್ದೇನು? ತುಮಕೂರಿನಲ್ಲಿ ಭಾನುವಾರ ನಡೆದ ಬಂಜಾರ ಸಮುದಾಯದ ಕಾರ್ಯಕ್ರಮದಲ್ಲಿ ಮಾತನಾಡಿದ ಗೃಹ ಸಚಿವ ಪರಮೇಶ್ವರ್ ಅವರು, ರಸ್ತೆ ಮತ್ತು ಚರಂಡಿಗಳ ನಿರ್ಮಾಣದಿಂದ ಜನಸಮೂಹ ಉದ್ಧಾರವಾಗುತ್ತದೆಯೇ? ಬಡವರ ಜೀವನ ಉದ್ಧಾರವಾಗುತ್ತಾ ಎಂದು ಪ್ರಶ್ನಿಸಿದ್ದರು. ರಸ್ತೆ, ಚರಂಡಿ ಅಥವಾ ಇನ್ನಿತರ ಕಾರ್ಯಕ್ರಮಗಳಿಂದ ಮಾತ್ರ ಬಡವರ ಜೀವನದಲ್ಲಿ ಬದಲಾವಣೆ ಬರೋದಿಲ್ಲ. ಸಾವಿರಾರು ವರ್ಷಗಳ ಶೋಷಣೆಯನ್ನು ಕೊನೆಗಾಣಿಸುವುದು. ಜನರ ಜೀವನವನ್ನು ಸುಧಾರಿಸುವುದೇ ಗ್ಯಾರಂಟಿ ಯೋಜನೆಗಳ ಮುಖ್ಯ ಉದ್ದೇಶ ಎಂದಿದ್ದಾರೆ.

ನಾವು ರಸ್ತೆ, ಮನೆ ನಿರ್ಮಾಣ ಅಥವಾ ನೀರಾವರಿ ಯೋಜನೆಗಳನ್ನು ನಿಲ್ಲಿಸಿಲ್ಲ, ನಿರ್ಮಾಣ ಕಾಮಗಾರಿ ನಿಧಾನವಾಗಿರಬಹುದು. ಆದರೆ, ಅವು ಎಂದಿಗೂ ನಿಲ್ಲುವುದಿಲ್ಲ. ಜನರ ಜೀವನ ಉತ್ತಮಗೊಳ್ಳಬೇಕು ಮತ್ತು ಸುಧಾರಣೆಯಾಗಬೇಕು ಎಂಬ ದೃಷ್ಟಿಯಿಂದಲೇ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಗೃಹ ಸಚಿವರು ಹೇಳಿದ್ದರು.

# ಸದ್ಭಾವನಾ ಮೂರ್ತಿ ಸಪ್ಪಣ್ಣಾರ್ಯರು ಕಿರುಚಿತ್ರಕ್ಕೆ ಪೂಜ್ಯ ಡಾ.ಸದಾಶಿವ ಮಹಾಸ್ವಾಮೀಜಿ ಚಾಲನೆ



**ಸೇಡಂ, ಡಿ,16–** ಕಲ್ಯಾಣ ನಾಡಿನ ಪವಾಡ ಪುರುಷ, ಲಿಂಗೈಕ್ಯ ಪೂಜ್ಯ ಸಪ್ಪಣ್ಣಾರ್ಯರ ಜೀವನ ಚರಿತ್ರೆ ಆಧಾರಿತ ಸದ್ಭಾವನಾ ಮೂರ್ತಿ ಸಪ್ಪಣ್ಣಾರ್ಯರು ಕಿರುಚಿತ್ರಕ್ಕೆ ಪೂಜ್ಯ ಡಾ.ಸದಾಶಿವ ಮಹಾಸ್ವಾಮೀಜಿ ಚಾಲನೆ ನೀಡಿ ಮಾತನಾಡಿದರು.

ಪಟ್ಟಣದ ಶ್ರೀ ಕೊತ್ತಲ ಬಸವೇಶ್ವರ ದೇವಾಲಯಲ್ಲಿ ಕ್ಯಾಮರಾ ಪೂಜೆ ನೆರವೇರಿಸಿದ ಅವರು, ಚಲನಚಿತ್ರ ತಂಡಕ್ಕೆ ಶುಭ ಕೋರಿದ್ದಾರೆ. ನೂರಾರು ವರ್ಷಗಳ ಇತಿಹಾಸ ಹೊಂದಿರುವ ಶ್ರೀ ಕೊತ್ತಲ ಬಸವೇಶ್ವರ ದೇವಾಲಯದ ಮೂಲ ಕರ್ತೃ ಲಿಂಗೈಕ್ಯ ಸಪ್ಪಣ್ಣಾರ್ಯರು, ಅವರ ಅಗಾಧ ಶಕ್ತಿಯಿಂದ ಇಲ್ಲಿನ ಕೊತ್ತಲ ಬಸವಣ್ಣ ಜನರ ಪಾಲಿನ ದೇವರಾದರು.ಸಕಲವನ್ನೂ ತ್ಯಾಗ ಮಾಡಿ ಈ ನೆಲದ ಒಳಿತಿಗಾಗಿ ಕಾಲಿಟ್ಟ ಸಪ್ಪಣ್ಣಾರ್ಯರ ಚರಿತ್ರೆಯನ್ನು ಈಗಾಗಲೇ ಅನೇಕ ಬಾರಿ ನಾಟಕದ ಮೂಲಕ ಪ್ರಸ್ತುತಪಡಿಸಲಾಗಿದೆ. ಈಗ ಡಿಜಿಟಲ್ ಮಾಧ್ಯಮದ ಮೂಲಕ ಕಿರುಚಿತ್ರ ನಿರ್ಮಾಣಕ್ಕೆ ಪಾದಾರ್ಪಣೆ ಮಾಡಲಾಗುತ್ತಿದೆ. ಇದೊಂದು ಇತಿಹಾಸ ನಿರ್ಮಿಸುವ ಚಿತ್ರವಾಗಲಿದೆ ಎಂದು ಅವರು ಇದೇ ವೇಳೆ ಶುಭ ಹಾರೈಸಿದರು.

ನಾಟಕ ಅಕಾಡೆಮಿ ಪ್ರಶಸ್ತಿಗೆ ಭಾಜನರಾದ, ಹಿರಿಯ ರಂಗ ಕಲಾವಿದ ಶಿವಯ್ಯಸ್ವಾಮಿ ಬಿಬ್ಬಳ್ಳಿ, ಡಾ. ಮುರಳೀಧರ ದೇಶಪಾಂಡೆ, ಪ್ರೊ. ಶೋಭಾದೇವಿ ಚೆಕ್ಕಿ,ಸಂಗಣ್ಣ ಅಲ್ದಿ, ಸೂರ್ಯಕಾಂತ ನಿಂಗದಳ್ಳಿ,ಶಿವಾರೆಡ್ಡಿ ಗೌಡನಹಳ್ಳಿ, ಶೃತಿ ಚರಂತಿಮಠ, ರಾಜಶೇಖರ ಮಂಗಲಗಿ, ಮಲ್ಲಿಕಾರ್ಜುನ ದಿಗ್ಗಾವ,ಪ್ರವೀಣ ಇಂಜಳ್ಳಿ, ಈರಣ್ಣ ರೆಮ್ಮಣ್ಣಿ,ಬಸಲಿಂಗಪ್ಪ ಬಾಳಿ, ಶಿವು ಧುತ್ತರಗಿ ಮಲಕೂಡ,ಶಿವಕುಮಾರ ಹಿರೇಮಠ, ಮಂಜುನಾಥಸ್ವಾಮಿ,ವೆಂಕು,ರಾಘು ಪಂಗರಗಿ, ನಿರ್ದೇಶಕ ಯುವರಾಜ ಗುತ್ತೇದಾರ ಇತರರು ಉಪಸ್ಥಿತರಿದ್ದರು.

# ಧನಾತ್ಮಕ ಚಿಂತನೆಯಿಂದ ಜೀವನದಲ್ಲಿ ಯಶಸ್ಸು




**ಬೀದರ್:ಡಿ.16–** ದೊಡ್ಡ ಕನಸು ಹಾಗೂ ಧನಾತ್ಮಕ ಚಿಂತನೆಗಳಿಂದ ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯವಿದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ)ಯ ಉಪ ನಿರ್ದೇಶಕ ಚಂದ್ರಕಾಂತ ಶಹಾಬಾದಕರ್ ಹೇಳಿದರು.

ನಗರದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ 2025-26ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಓದಿನ ಜತೆಗೆ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಇತರ ಸಮಾಜ ಸೇವಾ ಚಟುವಟಿಕೆಗಳಲ್ಲೂ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ರಾಷ್ಟ್ರೀಯ ಸೇವಾ ಯೋಜನೆ ಶಿಸ್ತು, ಸಹಬಾಳ್ವೆ ಕಲಿಸುತ್ತದೆ. ನಾವೆಲ್ಲರೂ ಒಂದೇ ಎಂಬ ಭಾವ ಬೆಳೆಸುತ್ತದೆ. ಸಮಾಜ ಸೇವಾ ಚಟುವಟಿಕೆಗಳಿಗೆ ಪ್ರೇರಣೆ ನೀಡುತ್ತದೆ ಎಂದು ಹೇಳಿದರು.

ಪ್ರೌಢಶಾಲಾ ವಿಭಾಗದ ಉಪ ಪ್ರಾಚಾರ್ಯ ಗುಂಡಪ್ಪ ಹುಡಗೆ ಮಾತನಾಡಿ, ಸದ್ಯ ಸ್ಪರ್ಧಾತ್ಮಕ ಯುಗ ಇದೆ. ಹೀಗಾಗಿ ವಿದ್ಯಾರ್ಥಿಗಳು ಸ್ಪರ್ಧೆಗೆ ಹೊಂದಿಕೊಂಡು ಮುನ್ನಡೆಯಬೇಕು ಎಂದು ಸಲಹೆ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜು ಪ್ರಾಚಾರ್ಯ ವಿಜಯಕುಮಾರ ತೋರಣೆಕರ್ ಮಾತನಾಡಿ, ದೇಶವನ್ನು ಸ್ವಚ್ಛ ಹಾಗೂ ಸುಂದರವನ್ನಾಗಿಸಲು ವಿದ್ಯಾರ್ಥಿಗಳು ಕೊಡುಗೆ ನೀಡಬೇಕು ಎಂದು ತಿಳಿಸಿದರು.

ಸಾಹಿತಿ ರಮೇಶ ಬಿರಾದಾರ, ಉಪನ್ಯಾಸಕರಾದ ಅಬ್ದುಲ್ ಮಜೀದ್, ಸುಲೇಖ, ಕವಿತಾ ಮತ್ತಿತರರು ಇದ್ದರು.

ಫರೀನ್ ಪ್ರಾರ್ಥನೆ, ಭವಾನಿ ಮತ್ತು ಸಂಗಡಿಗರು ಸ್ವಾಗತ ಹಾಗೂ ಸುಪ್ರಿಯ ಮತ್ತು ತಂಡದವರು ಎನ್.ಎಸ್.ಎಸ್. ಗೀತೆ ಗಾಡಿದರು. ಅರ್ಥಶಾಸ್ತ್ರ ಉಪನ್ಯಾಸಕ ರಾಜಶೇಖರ ಮಂಗಲಗಿ ಸ್ವಾಗತಿಸಿದರು. ಬಸವರಾಜ ಮಯೂರ ನಿರೂಪಿಸಿದರು. ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ವರಲಕ್ಷ್ಮಿ ಜಾಧವ್ ವಂದಿಸಿದರು.

# ವಿಜಯಾ ಕಿಶೋರ್ ಗೆ ಸ್ವರ ಶ್ರದ್ಧಾಂಜಲಿ




**ಬಳ್ಳಾರಿ ಡಿ .16–** ನಗರದ ಹಲವಾರು ಸಂಗೀತಾಸಕ್ತ ವಿದ್ಯಾರ್ಥಿಗಳಿಗೆ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತದ ವಿದ್ಯೆಯನ್ನು ಧಾರೆಯೆರೆದ ವಿಜಯಾ ಕಿಶೋರ್ ಅವರ ನಾಲ್ಕನೇ ಪುಣ್ಯ ಸ್ಮರಣೆಯ ಅಂಗವಾಗಿ ನಿನ್ನೆ ಇಲ್ಲಿನ ರಾಘವ ಕಲಾಮಂದಿರದಲ್ಲಿ "ಸ್ವರ ಶ್ರದ್ಧಾಂಜಲಿ" ಯನ್ನು ಶಿಷ್ಯವೃಂದವು ಗಾಯನದ ಮೂಲಕ ಸಲ್ಲಿಸಿತು.

ಆಹ್ವಾನಿತ ಕಲಾವಿದ ರಾಯಚೂರಿನ ವರದೇಂದ್ರ ಗಂಗಾಖೆಡ್ ಶಾಸ್ತ್ರೀಯ ಸಂಗೀತ ಪ್ರಸ್ತುತಪಡಿಸಿದರು. ರಾಗ್ ಜೋಗ್ ಮೂಲಕ ಪ್ರಾರಂಭಿಸಿ ಹಲವು ದಾಸರ ಪದಗಳನ್ನು ಹಾಡಿ ಭೈರವಿ ರಾಗದಿಂದ ಶ್ರೋತೃಗಳ ಮನ ತಣಿಸಿದರು. ಇವರಿಗೆ ತಬಲಾ ಸಾಥ್ ಬೆಂಗಳೂರಿನ ಪ್ರಮೋದ್ ಗಬ್ಬುರ್ ಹಾಗೂ ಶ್ರೀಪಾದ ನೀಡಿದರೆ ಹಾರ್ಮೋನಿಯಂ ಸಾಥ್ ನಗರದ ದೊಡ್ಡಬಸವ ಗವಾಯಿ ಡಿ ಕಗ್ಗಲ, ತಾಂಪುರದಲ್ಲಿ ಶಕುಂತಲಾ, ತಾಳದಲ್ಲಿ ರಾಮರಾವ್ ಕುಲಕರ್ಣಿ ಸಾಥ ನೀಡಿದರು.

ಇದಕ್ಕೂ ಮೊದಲು ವಿಜಯಾ ಕಿಶೋರ್ ಅವರ ಭಾವ ಚಿತ್ರಕ್ಕೆ ಕಲಾ ಪೋಷಕರಾದ ಡಾ ಸಿ.ಎಂ. ವೀರೇಂದ್ರಕುಮಾರ, ಅನಿತಾ ವೀರೇಂದ್ರಕುಮಾರ್, ಭೀಮಿನೇನಿ ಪ್ರಸಾದ್, ಭೀಮಿನೇನಿ ಭಾಸ್ಕರ್, ಕೊಲಚಲಂ ಸುಧಾಕರ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮಕ್ಕರ ಚಾಲನೆ ನೀಡಿದರು.

ಶಿಷ್ಯಂದಿರಾದ ಸಂಧ್ಯಾ ಕೋಲಾಚಲಂ, ಅನುಕೃಪ (ರೌಡೂರ್) ಪುರೋಹಿತ, ಅಲಕಾ ದೇಶಪಾಂಡೆ, ಶಶಾಂಕ್, ಅಭಯ್, ಜಯಲಕ್ಷ್ಮಿ, ರೋಹಿಣಿ, ಶಶಿಕಲಾ, ಅಭಿಜ್ಞಾ, ಶಮಂತ್, ಆಯುಷ್ ಹಾಗೂ ಇಂದೂಶ್ರೀ ಇವರು ತಮ್ಮ ಗಾಯನದಿಂದ ಶ್ರೋತೃಗಳ ಮನ ಸೂರೆಗೊಂಡರು. ಇವರಿಗೆ ಹಾರ್ಮೋನಿಯಂ ನಲ್ಲಿ ಫೋಲಕ್ಸ್ ಹನುಮಂತಪ್ಪ, ತಬಲಾ ದಲ್ಲಿ ಎಂ. ಅಹಿರಾಜ ಹಾಗೂ ಸುಧಾಕರ್ ಸಾಥ ನೀಡಿದರು. ಅರುಣಾ ಸಂತೋಷ್, ಸುಭದ್ರಾ ಕಾರ್ಯಕ್ರಮ ನಿರೂಪಿಸಿದರು.

